# ಶ್ರೀ ವೆಂಕಟರಮಣ ಸಮೂಹ ವಿದ್ಯಾ ಸಂಸ್ಥೆ : ಗಾಂಧಿಜಯಂತಿ



ಶ್ರೀ ವೆಂಕಟರಮಣ ಆಂಗ್ಲಮಾಧ್ಯಮ ಶಾಲೆಯ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳ ಸಹಯೋಗದೊಂದಿಗೆ ಗಾಂಧಿ ಹಾಗೂ ಶಾಸ್ತ್ರಿ ಜಯಂತಿ ಆಚರಣೆಯನ್ನು ಶ್ರೀ ವೆಂಕಟರಮಣ ಸಮೂಹ ವಿದ್ಯಾ ಸಂಸ್ಥೆಯಲ್ಲಿ ಆಚರಿಸಲಾಯಿತು. ಸಮಾರಂಭದ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್‌ನ ಸ್ಥಾನೀಯ ಆಯುಕ್ತರಾದ ಕೊಗ್ಗ ಗಾಣಿಗರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಗಾಂಧಿ ಹಾಗೂ ಶಾಸ್ತ್ರಿ ವಿಚಾರಧಾರೆಗಳ ಕುರಿತು ಮಾತನಾಡಿದರು. ಹಾಗೂ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್‌ನ ತರಬೇತಿ ಆಯುಕ್ತರಾದ ಆನಂದ ಅಡಿಗ ಇವರು ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳ ಕುರಿತು ಮಾತನಾಡಿದರು. ಗಾಂಧಿ ಹಾಗೂ ಶಾಸ್ತ್ರಿಗಳ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಲಾಯಿತು ಹಾಗೂ ಸರ್ವಧರ್ಮ ಪ್ರಾರ್ಥನೆ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ಕೃಷ್ಣ ಅಡಿಗ, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕಿ , ಶ್ರೀಮತಿ ರೇಷ್ಮಾ ಡಿಸೋಜ, ಪ್ರೌಢಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಾದ ಸುಬ್ರಹ್ಮಣ್ಯ ಇವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ಸಂಸ್ಥೆಯ ಗೈಡ್ ಶಿಕ್ಷಕಿಯರಾದ ಶ್ರೀಮತಿ ಪದ್ಮಾವತಿ ಹಾಗೂ ಶ್ರೀಮತಿ ಅಶ್ವಿನಿಯವರು ಪ್ರಾರ್ಥಿಸಿ, ಸಂಸ್ಥೆಯ ಕನ್ನಡ ಉಪನ್ಯಾಸಕರಾದ ಉದಯ್ ನಾಯ್ಕ್‌ರವರು ಕಾರ್ಯಕ್ರಮ ನಿರೂಪಿಸಿ ಮುಖ್ಯಶಿಕ್ಷಕಿ ಶ್ರೀಮತಿ ಪ್ರಮೀಳಾ ಡಿಸೋಜಾರವರು ವಂದಿಸಿದರು.

# ಕಿನಾರ ಬೀಚ್ ಸ್ವಚ್ಛತೆ



ಬ್ಯಾರೀಸ್ ಶಿಕ್ಷಣ ಸಂಸ್ಥೆ, ಜೆಸಿಐ ಕುಂದಾಪುರ ಸಿಟಿ ಇವರ ಸಹಭಾಗಿತ್ವದಲ್ಲಿ ಕೊಡಿ ಕಿನಾರ ಬೀಚ್ ಸ್ವಚ್ಛತಾ ಕಾರ್ಯಕ್ರಮ ಜರುಗಿತು. ಸ್ವಚ್ಚತಾ ಕಾರ್ಯಕ್ರಮದಲ್ಲಿ ಅರಣ್ಯ ಸಂರಕ್ಷಣಾಧಿಕಾರಿ ಶೈಲೇಶ್ ರೆಡ್ಡಿ , ಬ್ಯಾರೀಸ್ ಸಮೂಹ ಸಂಸ್ಥೆಯ ಮುಖ್ಯಸ್ಥ ಸಯ್ಯದ್ ಬ್ಯಾರಿ , ಪ್ರಾಂಶುಪಾಲರಾದ ದೋ.ಮ. ಚಂದ್ರಶೇಖರ್ , ಜೆಸಿಐ ಕುಂದಾಪುರ ಸಿಟಿ ಅಧ್ಯಕ್ಷ ವಿಜಯ ಭಂಡಾರಿ, ಸ್ಥಾಪಕಾಧ್ಯಕ್ಷ ಹುಸೇನ್ ಹೈಕಾಡಿ, ಕಾರ್ಯದರ್ಶಿ ಗುರುರಾಜ್ ಕೊತ್ವಾಲ್ ಹಾಗೂ ಬ್ಯಾರೀಸ್ ಶಿಕ್ಷಣ ಸಂಸ್ಥೆಯ ಶಿಕ್ಷಕರು , ವಿದ್ಯಾರ್ಥಿಗಳು ಮತ್ತು ನಾಗರಿಕರು ಭಾಗವಹಿಸಿದ್ದರು.

# ಕಾರಂತರ ಹೆಜ್ಜೆ ಗುರುತುಗಳು ಶಾಶ್ವತ– ಶ್ರೀಎ.ಎಸ್.ಎನ್ ಹೆಬ್ಬಾರ್



ಕಾರಂತರು ಬದುಕಿದ ರೀತಿ, ಅವರು ಜೀವಿತಾವಧಿ ನಂತರ ಬಿಟ್ಟು ಹೋದ ಹೆಜ್ಜೆಗುರುತುಗಳು ಮುಂದಿನ ಜನಾಂಗಕ್ಕೆ ದಾರಿ ದೀಪವಾಗಲಿ, ಅವರ ನೆನಪು ಶಾಶ್ವತವಾಗುವ ನಿಟ್ಟಿನಲ್ಲಿ ಕೋಟದ ಕಾರಂತ ಥೀಮ್ ಪಾರ್ಕ್ ಸ್ಥಾಪನೆಯ ಉದ್ದೇಶ ಸಾಕಾರಗೊಳ್ಳುತ್ತಿರುವುದು ಸಂಭ್ರಮದ ವಿಷಯ ಎಂದು ಹಿರಿಯ ಸಾಹಿತಿ ಶ್ರೀ ಎ ಎಸ್. ಎನ್ ಹೆಬ್ಬಾರ್ ಅವರು ಹೇಳಿದರು.

ಅವರು ಕೋಟತಟ್ಟು ಗ್ರಾಮ ಪಂಚಾಯತ್, ಡಾ॥ ಶಿವರಾಮ ಕಾರಂತ ಹುಟ್ಟೂರ ಪ್ರಶಸ್ತಿ ಪ್ರತಿಷ್ಠಾನ(ರಿ)ಕೋಟ, ಡಾ॥ ಶಿವರಾಮ ಕಾರಂತ ಟ್ರಸ್ಟ್(ರಿ) ಉಡುಪಿ ಸಹಯೋಗದಲ್ಲಿ ಡಾ॥ ಶಿವರಾಮ ಕಾರಂತ ಜನ್ಮದಿನೋತ್ಸವ ಹಾಗೂ ಹುಟ್ಟೂರ ಪ್ರಶಸ್ತಿಗೆ 17 ನೇ ವರುಷದ ಸಂಭ್ರಮದ ಸಾಹಿತ್ಯಕ –ಸಾಂಸ್ಕೃತಿಕ ಕಾರ್ಯಕ್ರಮ ನಿರೂಪಿತ–2021(ಎಣೆಯಿಲ್ಲದ ಚಕಿತ) ಕಾರ್ಯಕ್ರಮದಲ್ಲಿ ನುಡಿ ಚೇತನದಲ್ಲಿ ಕಾರಂತರ ಕೊನೆಯ ದಿನಗಳ ಬಗ್ಗೆ ಮೆಲುಕು ಹಾಕಿ ಮಾತನಾಡುತ್ತಿದ್ದರು.

ಕಾರಂತರು ನಮ್ಮೊಳಗಿನ ಮಹಾನ್ ಚೈತನ್ಯ ಅವರ ಅಂತ್ಯ ಸಂಸ್ಕಾರವಾದ ಸ್ಥಳದಲ್ಲಿ ಸಮಾಧಿ ನಿರ್ಮಾಣವಾಗಿ ಕಾರಂತ ಅಭಿಮಾನಿ–ಸಾಹಿತ್ಯ ಪ್ರೇಮಿಗಳಿಗೆ ನೋಡುವ ಭಾಗ್ಯ ಸಿಗಲಿ ಎಂದು ಹೆಬ್ಬಾರರು ಹೇಳಿದರು. ಕಾರ್ಯಕ್ರಮವನ್ನು ಕಾರಂತ ಪ್ರತಿಷ್ಠಾನದ ಕಾರ್ಯದರ್ಶಿ ನರೇಂದ್ರ ಕುಮಾರ್ ಅವರು ನಿರೂಪಿಸಿದರು.

# ಮಹಿಳೆಯರು ಮುಖ್ಯ ವಾಹಿನಿಗೆ ಬರಲು ಹಿಂಜರಿಯುತ್ತಿರುವುದು ವಿಷಾದನೀಯ – ಶ್ರೀಮತಿ ಸುಮಿತ್ರಾ ಐತಾಳ್



ಕೋಟ ಡಾ. ಕಾರಂತ ಥೀಂ ಪಾರ್ಕ್‌ನಲ್ಲಿ ಕೋಟತಟ್ಟು ಗ್ರಾಮ ಪಂಚಾಯತ್, ಡಾ. ಶಿವರಾಮ ಕಾರಂತ ಟ್ರಸ್ಟ್ (ರಿ), ಉಡುಪಿ, ಡಾ. ಶಿವರಾಮ ಕಾರಂತ ಹುಟ್ಟೂರ ಪ್ರಶಸ್ತಿ ಪ್ರತಿಷ್ಠಾನದ (ರಿ) ಕೋಟ ಸಹಯೋಗದಲ್ಲಿ ನಡೆದ ಉಡುಪಿ ಜಿಲ್ಲಾ ಮಹಿಳಾ ಸಾಹಿತ್ಯ ಸಾಂಸ್ಕೃತಿಕ ಸಮ್ಮೇಳನ, ಮಣೂರು ಅಶ್ವಿನಿ ಮಧ್ಯಸ್ಥ ಸ್ಮಾರಕ ಸಾಧನಾ ಶ್ರೀ ಮಹಿಳಾ ಪುರಸ್ಕಾರ ಪ್ರದಾನ ಸಮಾರಂಭ ಭಾವಗಾನ 2021 (ಸಾಧನೆಯ ತಿಲ್ಲಾನ) ಕಾರ್ಯಕ್ರಮದ ಸಮ್ಮೇಳನದ್ಯಕ್ಷೆ ನೆಲೆಯಲ್ಲಿ ಸಾಹಿತಿ ಸುಮಿತ್ರಾ ಐತಾಳ್ ಮಾತನಾಡಿದರು.

ಸಾಂಸ್ಕೃತಿಕ ಚಿಂತಕಿ ಸುಧಾ ಮಣೂರು ಕದ್ರಿಕಟ್ಟು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾರಂಭದಲ್ಲಿ ಕೋಟೇಶ್ವರದ ಸುಮಿತ್ರಾ ಐತಾಳ್, ಸಂಧ್ಯಾ ಲಕ್ಷ್ಮಣ್ ಆಚಾರ್ಯ, ಮಂಜುಳಾ ತೆಕ್ಕಟ್ಟೆ, ಚಂದ್ರಿಕಾ ಧನ್ಯ, ಕಲ್ಪನಾ ಭಾಸ್ಕರ್ , ಅಮಿತ ಪ್ರಕಾಶ್ ಕ್ರಮಧಾರಿ, ವಿನಂತಿ ಶೆಟ್ಟಿ ಕೋಟೇಶ್ವರ, ರೇವತಿ ಪ್ರಭಾಕರ ಗಾಣಿಗ ಮತ್ತು ಗೀತಾ ಮರಕಾಲ ಅವರಿಗೆ ಅಶ್ವಿನಿ ಸ್ಮಾರಕ ಸಾಧನ ಶ್ರೀ ಮಹಿಳಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಪ್ರಗತಿಪರ ಕೃಷಿಕ ರವೀಂದ್ರ ಐತಾಳ, ಥೀಂ ಪಾರ್ಕ್‌ನ ವಿಶೇಷ ಕರ್ತವ್ಯಾಧಿಕಾರಿ ಪೂರ್ಣಿಮಾ, ಕೋಟತಟ್ಟು ಗ್ರಾಮ ಪಂಚಾಯಿತಿ ಸದಸ್ಯ ಸತೀಶ್ ಬಾರಿಕೆರೆ, ದಿನೇಶ್ ಆಚಾರ್ಯ ಉಪಸ್ಥಿತರಿದ್ದರು.

ಟ್ರಸ್ಟ್‌ನ ಕಾರ್ಯದರ್ಶಿ ನರೇಂದ್ರ ಕುಮಾರ್ ಕೋಟ ಪ್ರಾಸ್ತವಿಕವಾಗಿ ಮಾತನಾಡಿದರು. ಥೀಂ ಪಾರ್ಕ್ ಮೇಲ್ವಿಚಾರಕ ಪ್ರಶಾಂತ್ ಕಾರ್ಯಕ್ರಮ ನಿರೂಪಿಸಿದರು. ಪಂಚಾಯತ್ ಸದಸ್ಯೆ ಶ್ರೀಮತಿ ವಿದ್ಯಾ ಸಾಲಿಯಾನ್ ವಂದಿಸಿದರು. ನಂತರ ಬಹುವಿಧ ಗೋಷ್ಠಿ, ನನ್ನ ಕಥೆ ನಿಮ್ಮ ಜೊತೆ ಮಾತುಕತೆ ಕಾರ್ಯಕ್ರಮಗಳು ನಡೆದವು.

# ಕೋಡಿ ಶ್ರೀರಾಮ ವಿದ್ಯಾಕೇಂದ್ರ – ಗಾಂಧಿ ಜಯಂತಿ ಆಚರಣೆ

ಕೋಡಿ ಶ್ರೀ ರಾಮ ವಿದ್ಯಾ ಕೇಂದ್ರದಲ್ಲಿ ಗಾಂಧಿ ಜಯಂತಿಯನ್ನು ಆಚರಿಸಲಾಯಿತು. ಗಾಂಧೀಜಿಯವರು ವಿಶ್ವದ ಅಗ್ರಮಾನ್ಯ ಚಿಂತಕ ಹಾಗೂ ಆದರ್ಶ ನಾಯಕ. ಇವರ ಜೀವನಾದರ್ಶಗಳನ್ನು ಎಲ್ಲರೂ ಪಾಲಿಸುವಂತಾಗಲಿ ಎಂದು ಕಾರ್ಯಕ್ರಮದಲ್ಲಿ ಪಾಲ್ಗೊಂಡ ವಿದ್ಯಾ ಕೇಂದ್ರದ ಅಧ್ಯಕ್ಷ ಕೋಡಿ ನಾಗೇಶ್ ಕಾಮತ್ ಅವರು ಹೇಳಿದರು. ವಿದ್ಯಾ ಕೇಂದ್ರದ ಸುತ್ತಮುತ್ತಲಿನ ಪರಿಸರವನ್ನು ಸಾರ್ವಜನಿಕರ ಸಹಕಾರದೊಂದಿಗೆ ಸ್ವಚ್ಛಗೊಳಿಸಲಾಯಿತು. ಶಾಲಾ ಸಂಪರ್ಕಾಧಿಕಾರಿ ಮಾರ್ಕೋಸ್ ಪಿಂಟೋ, ಆಡಳಿತಾಧಿಕಾರಿ, ಶ್ರೀಮತಿ ಮಮತಾ, ಪ್ರೌಢಶಾಲಾ ಮುಖ್ಯ ಶಿಕ್ಷಕ ಜಿತೇಂದ್ರ, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕಿ ಸಂಗೀತ ಮೊದಲಾದವರು ಉಪಸ್ಥಿತರಿದ್ದರು.

# ತೆನೆ ಪೂಜೆ (ಕದುರುಕಟ್ಟುವುದು)

ಬಂಟರ ಯಾನೆ ನಾಡವರ ಮಾತೃ ಸಂಘ (ರಿ) ಮಂಗಳೂರು ಇದರ ತಾಲ್ಲೂಕು ಸಮಿತಿ ಕುಂದಾಪುರ ಇವರ ವತಿಯಿಂದ ದಿನಾಂಕ 08–10–2021 ಶುಕ್ರವಾರ ಬೆಳಿಗ್ಗೆ ಗಂಟೆ 9.00ಕ್ಕೆ ಸರಿಯಾಗಿ ಕುಂದಾಪುರ ಬಂಟರ ಯಾನೆ ನಾಡವರ ಸಂಕೀರ್ಣದಲ್ಲಿ ವರ್ಷಂಪ್ರತಿಯಂತೆ 'ತೆನೆಪೂಜೆ" (ಕದುರುಕಟ್ಟುವುದು) ಈ ವರ್ಷವೂ ನಡೆಯಲಿದ್ದು, ಈ ಕಾರ್ಯಕ್ರಮಕ್ಕೆ ಬಂಟ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಕಾರ್ಯಕ್ರಮದ ಸದುಪಯೋಗವನ್ನು ಪಡೆದುಕೊಳ್ಳಬೇಕಾಗಿ ಈ ಮೂಲಕ ಸಂಚಾಲಕ ಆವರ್ಸೆ ಸುಧಾಕರ ಶೆಟ್ಟಿ ವಿನಂತಿಸಿದ್ದಾರೆ.

